9.3.25
123-0-155

ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಪಿ.ಹೆಚ್. ಪೂಜಾರ ಇವರು ಶೂನ್ಯವೇಳೆಯಲ್ಲಿ ದಿನಾಂಕ:18.03.2025ರಂದು ಕನ್ನಡ ದಿನಪತ್ರಿಕೆಯೊಂದರಲ್ಲಿ ಪ್ರಕಟಣೆಗೊಂಡಿರುವ ಕಲಾದಗಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಒಬ್ಬರೇ ವೈದ್ಯರು- 80 ಸಾವಿರ ಜನರಿಗೆ ಇದೊಂದೇ ಆರೋಗ್ಯ ಕೇಂದ್ರ! ಮೇಲ್ದರ್ಜೆಗೇರಿಸಲು ಒತ್ತಾಯ ಎಂಬ ವಿಶೇಷ ಶೀರ್ಷಿಕೆಯಡಿ ವರದಿಯಾಗಿರುವುದರ ವಿಷಯ ಪ್ರಸ್ತಾಪಿಸಲು ಅವಕಾಶ ನೀಡಬೇಕೆಂದು ಕೋರುತ್ತೇನೆ.

ರಾಜ್ಯದಲ್ಲಿಯೇ ಅತಿ ಹೆಚ್ಚು ಜನಸಂಖ್ಯೆ ವ್ಯಾಪ್ತಿ ಹೊಂದಿರುವ ಕಲಾದಗಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಮೂಲಭೂತವಾಗಿ ಅಗತ್ಯವಿರುವ ಸಿಬ್ಬಂದಿಗಳೇ ಇಲ್ಲದಿರುವುದು ದುಸ್ಥಿತಿಗೆ ಕಾರಣವಾಗಿದೆ. 80 ಸಾವಿರ ಜನಸಂಖ್ಯೆಯ ವ್ಯಾಪ್ತಿಯ ಈ ಆರೋಗ್ಯ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವುದು ಗುತ್ತಿಗೆ ಆಧಾರದಲ್ಲಿರುವ ವೈದ್ಯರೊಬ್ಬರೇ! ಎಂಬ ವರದಿಯಾಗಿದೆ.

ಬಾಗಲಕೋಟ ಜಿಲ್ಲೆಯ ವ್ಯಾಪ್ತಿಯಲ್ಲಿಯೇ ಈ ಆರೋಗ್ಯ ಕೇಂದ್ರ ದೊಡ್ಡದಾಗಿದ್ದು, ಪ್ರತಿ 10 ಸಾವಿರ ಜನಸಂಖ್ಯೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರವಿರಬೇಕೆಂಬುದು ಸರ್ಕಾರದ ನಿಯಮವಿದೆ. ಆದರೆ ಈ ನಿಯಮ ಇಲ್ಲಿ ಅನ್ವಯವಾಗಿಲ್ಲ ಎನ್ನುವುದು ದೊಡ್ಡ ದುರ್ದೈವದ ಸಂಗತಿ.

ಈ ಪರಿಸ್ಥಿತಿಗೆ ಸರ್ಕಾರಗಳ ಅಸಡ್ಡೆಯೇ ಕಾರಣವಾಗಿರುತ್ತದೆ ಎಂಬ ಸುದಿಯಾಗಿದೆ. 20 ಸಾವಿರಕ್ಕೂ ಮಿಕ್ಕ ಜನಸಂಖ್ಯೆಯ ಕಲಾದಗಿ ಗ್ರಾಮ, ಆಸುಪಾಸಿನ ಹತ್ತಾರು ಗ್ರಾಮಗಳು ಅತ್ತ ಹೊಳೆ ಆಚೆಗಿನ ಒಂದಿಷ್ಟು ಊರುಗಳು ಮುಖ್ಯವಾಗಿ ಬಾಗಲಕೋಟೆ ಸಮೀಪದ ಯಂಕಂಚಿ, ಕದಂಪುರ, ಮುರುನಾಳ ಸೇರಿದಂತೆ ಮುಂತಾದ ಗ್ರಾಮಗಳು ಈ ಆರೋಗ್ಯ ಕೇಂದ್ರದ ವ್ಯಾಪ್ತಿಯಲ್ಲಿವೆ.

ಮುರನಾಳ ಗ್ರಾಮದಲ್ಲಿ ಮಧ್ಯೆ ಮತ್ತೊಂದು ಪ್ರಾಥಮಿಕ ಆರೋಗ್ಯ ಕೇಂದ್ರ ಮಾಡಬೇಕೆಂದು ಜನರ ಬೇಡಿಕೆಯಾಗಿದೆ. ಪ್ರಸ್ತುತ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕಟ್ಟಡಗಳು ಇಂದು ಮುರಾರ್ಜಿ ವಸತಿ ಶಾಲೆಗೆ ಬಳಸುತ್ತಿರುವುದು ಎಷ್ಟು ಸರಿ. ಮುರನಾಳ ಆರೋಗ್ಯ ಕೇಂದ್ರ ಇನ್ನೂ ಕಾರ್ಯ ರೂಪಕ್ಕೆ ಬಂದಿಲ್ಲ.

ಬಹುದೊಡ್ಡ ವ್ಯಾಪ್ತಿಯ ಕಲಾದಗಿ ಆರೋಗ್ಯ ಕೇಂದ್ರ ಸಮುದಾಯ ಆರೋಗ್ಯ ಕೇಂದ್ರವಾಗಬಹುದಾದ ಎಲ್ಲ ಅರ್ಹತೆಗಳಿದ್ದರೂ ಅದಿನ್ನೂ ಈಡೇರದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ತಂದಿದೆ ಮತ್ತು ಅಸಮಾಧಾನವಾಗಿದ್ದಾರೆ. ಈ ಎಲ್ಲಾ ಗ್ರಾಮಗಳ ವ್ಯಾಪ್ತಿಯಲ್ಲಿ ಈ ಸರ್ಕಾರವಾದರೂ ಇಚ್ಛಾಶಕ್ತಿ ತೋರುವ ಮೂಲಕ ಉತ್ತಮ ಆರೋಗ್ಯ ಕೇಂದ್ರ ನಿರ್ಮಿಸಿ, ಮೇಲ್ದರ್ಜೆಗೇರಿಸಲು ಮುಂದಾಗಬೇಕೆಂದು ಜನರ ಆಶಯವಾಗಿದೆ. ಜತೆಗೆ ಖಾಯಂ ಸರ್ಕಾರಿ ಪುರುಷ ಹಾಗೂ ಮಹಿಳಾ ವೈದ್ಯರ ನೇಮಕ ತುರ್ತಾಗಿ ಆಗಬೇಕೆಂದು ಒತ್ತಾಯಿಸುವೆ.

ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಸೂಕ್ತ ಕ್ರಮ ಜರುಗಿಸುವ ಮೂಲಕ, ಕಲಾದಗಿ ಗ್ರಾಮಗಳ ಸುತ್ತ ಮುತ್ತಲಿನ ಊರುಗಳಿಗೆ ಅನುಕೂಲವಾಗುವ ಹಿತದೃಷ್ಟಿಯಿಂದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಿ, ಈ ಆರೋಗ್ಯ ಕೇಂದ್ರಕ್ಕೆ ವೈದ್ಯರನ್ನು ನೇಮಕ ಮಾಡಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಪ್ರಸ್ತಾಪಿಸಿರುವ ಬಗ್ಗೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಉತ್ತರ:-

IPHS 2022ರ ಮಾರ್ಗಸೂಚಿಯನ್ವಯ ಸಮತಟ್ಟು ಪ್ರದೇಶದಲ್ಲಿ 30,000 ಜನಸಂಖ್ಯೆಗೆ ಮತ್ತು ಗುಡ್ಡಗಾಡು ಹಾಗೂ ಗಿರಿಜನ ಪ್ರದೇಶದಲ್ಲಿ 20,000 ಜನಸಂಖ್ಯೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸಲು ಅವಕಾಶವಿರುತ್ತದೆ.

ಈ ಹಿಂದೆ 2022ರ ಯೋಜಿತ ಜನಸಂಖ್ಯೆಯನ್ವಯ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸಲಾಗುತ್ತಿತ್ತು. ಅದರಂತೆ ಬಾಗಲಕೋಟೆ ತಾಲ್ಲೂಕಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕೊರತೆಯಿದೆ. ಪ್ರಸ್ತುತ ರಾಜ್ಯದಲ್ಲಿ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಲು 2027ರ ಯೋಜಿತ ಜನಸಂಖ್ಯೆಯಂತೆ ಹಾಗೂ ಆರೋಗ್ಯ ಕೇಂದ್ರ ಮಂಜೂರು ಮಾಡಬೇಕಾದ ಸ್ಥಳದ ಸುತ್ತಲು ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆಗಳ ವಿವರ ಹಾಗೂ ಕ್ರಮಿಸಲು ಬೇಕಾದ ಅವಧಿಯನ್ನು ಪರಿಗಣಿಸಿ, ಕೊರತೆಯಿರುವ ತಾಲ್ಲೂಕುಗಳಲ್ಲಿ ಪ್ರಾಥಮಿಕ/ಸಮುದಾಯ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ ರವರಿಂದ 2027ರ ಜನಸಂಖ್ಯೆ ಸ್ವೀಕೃತವಾಗಿದ್ದು, ಇದರನ್ವಯ ಬಾಗಲಕೋಟೆ ತಾಲ್ಲೂಕಿನ ಗ್ರಾಮೀಣ ಜನಸಂಖ್ಯೆ:-1,85,681 ಎಂದು ಅಂದಾಜಿಸಲಾಗಿದ್ದು, 6 ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸಲು ಅವಕಾಶವಿದ್ದು, ಪ್ರಸ್ತುತ 5 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. 1 ಪ್ರಾಥಮಿಕ ಆರೋಗ್ಯ ಕೇಂದ್ರದ ಕೊರತೆಯಿರುವುದರಿಂದ 2027ರ

ಜನಸಂಖ್ಯೆಗನುಗುಣವಾಗಿ ಸ್ಥಳ ಗುರುತಿಸಿ ಪ್ರಸ್ತಾವನೆ ಸಲ್ಲಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ಬಾಗಲಕೋಟೆ ಇವರಿಗೆ ಸೂಚಿಸಲಾಗಿದೆ.

IPHS-2022ರ ಮಾರ್ಗಸೂಚಿಯನ್ವಯ ಸಮತಟ್ಟು ಪ್ರದೇಶದಲ್ಲಿ1,20,000 ಜನಸಂಖ್ಯೆಗೆ ಮತ್ತು ಗುಡ್ಡಗಾಡು ಹಾಗೂ ಗಿರಿಜನ ಪ್ರದೇಶದಲ್ಲಿ 80,000 ಜನಸಂಖ್ಯೆಗೆ ಒಂದು ಸಮುದಾಯ ಆರೋಗ್ಯ ಕೇಂದ್ರ ಸ್ಥಾಪಿಸಲು ಅವಕಾಶವಿರುತ್ತದೆ.

ಬಾಗಲಕೋಟೆ ಜಿಲ್ಲೆ ಹಾಗೂ ತಾಲ್ಲೂಕಿನಲ್ಲಿ 02 ಸಮುದಾಯ ಆರೋಗ್ಯ ಕೇಂದ್ರ ಸ್ಥಾಪಿಸಲು ಅವಕಾಶವಿದ್ದು, ಪ್ರಸುತ 01-ಸುತಗುಂಡಾರ ಸಮುದಾಯ ಆರೋಗ್ಯ ಕೇಂದ್ರ ಮಂಜೂರಾಗಿದ್ದು ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದೆ. ಸದರಿ ತಾಲ್ಲೂಕಿನಲ್ಲಿ 01 ಸಮುದಾಯ ಆರೋಗ್ಯ ಕೇಂದ್ರದ ಕೊರತೆಯಿದ್ದು, ಕಲಾದಗಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು ಆರ್ಥಿಕ ಇಲಾಖೆಯ ಷರತ್ತುಗಳನ್ವಯ ಪ್ರಸ್ತಾವನೆ ಸ್ವೀಕೃತವಾದ ನಂತರ ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಪ್ರಾಥಮಿಕ ಆರೋಗ್ಯ ಕೇಂದ್ರ ಕಲಾದಗಿಗೆ ಒಂದು ವೈದ್ಯಾಧಿಕಾರಿಗಳ ಹುದ್ದೆ ಮಂಜೂರಾಗಿದ್ದು, ಗುತ್ತಿಗೆ ಆಧಾರದ ಮೇಲೆ ವೈದ್ಯರನ್ನು ನೇಮಿಸಿಕೊಂಡಿದ್ದು ದಿ:01-02-2022ರಿಂದ ಕಾರ್ಯನಿರ್ವಹಿಸುತ್ತಿದ್ದಾರೆ.

ಪ್ರಸ್ತುತ ಇಲಾಖೆಯಲ್ಲಿ 120 ತಜ್ಞವೈದ್ಯರು ಹಾಗೂ 100 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇರನೇಮಕಾತಿ ಮುಖಾಂತರ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ಆಕುಕ 69 ಎಸ್‌ಬಿವಿ 2025

(ದಿನೇಶ್ ಗುಂಡೂರಾವ್)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು